Mis.3/2022 RW-1

ದಿನಾಂಕಃ 31.10.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟಿ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ನನ್ನ ವಿರುದ್ಧ O.S.No.133/2016ರಂತೆ ಅಸಲು ದಾವೆಯನ್ನು ಸಲ್ಲಿಸಲಾಗಿದೆ ಎಂದರೆ ಸರಿ. ಸದರಿ ದಾವೆಯಲ್ಲಿ ನನಗೆ ನ್ಯಾಯಾಲಯದಿಂದ ಸಮನ್ಸ್ ಜಾರಿಯಾದ ನಂತರ ನಮ್ಮ ವಕೀಲರ ಮೂಲಕ ಪ್ರತಿವಾದ ಪತ್ರ ಸಲ್ಲಿಸಿದ್ದೇವೆ ಎಂದರೆ ಸರಿ. ಈ ಅರ್ಜಿದಾರರು ಮೂಲತಃ ಕೇರಳಕ್ಕೆ ಸೇರಿದವರು ಎಂದರೆ ಸಾಕ್ಷಿ ಎಮ್ಮೇರಹಳ್ಳಿಗೆ ಸೇರಿದವರು ಎಂದು ನುಡಿದಿರುತ್ತಾರೆ. ಅರ್ಜಿದಾರರು ಮೂಲತಃ ಕೇರಳದ ಕಲ್ಲೂರಿನವರು ಎಂದರೆ ಸರಿಯಲ್ಲ. ಇಂದಿಗೂ ಸಹ ಅವರು ಕೇರಳದಲ್ಲಿ ವಾಸವಾಗಿದ್ದಾರೆ ಎಂದರೆ ಸರಿಯಲ್ಲ. O.S.No.133/2016ವಿಚಾರಣೆಗೆ ಬಂದ ಸಂದರ್ಭದಲ್ಲಿ ಕರೋನ-19 ಇತ್ತು ಎಂದರೆ ಸಾಕ್ಷಿ ಹೌದು ಎಂದು ನುಡಿದಿರುತ್ತಾರೆ, ನ್ಯಾಯಾಲಯವು ಚಾಲ್ತಿಯಲ್ಲಿ ಇತ್ತು ಎಂದು ನುಡಿದಿರುತ್ತಾರೆ. ಆ ಸಂದರ್ಭದಲ್ಲಿ ಕಕ್ಷಿದಾರರು ನ್ಯಾಯಾಲಯದ ಒಳಗೆ ಪ್ರವೇಶ ಮಾಡಲು ಬಿಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರ ಆರೋಗ್ಯದಲ್ಲಿ ಸಮಸ್ಯೆ ಇದ್ದು ಸದರಿ ದಾವೆಯನ್ನು ನಡೆಸಲು ಸಮಸ್ಯೆ ಇತ್ತು ಎಂದರೆ ಸರಿಯಲ್ಲ. ಈ ವಿಚಾರ ನನಗೆ ಗೊತ್ತಿದ್ದರು ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ14.02.2022ರಂದು O.S.No.133/2016 ವಜಾಗೊಳ್ಳಲು ಅರ್ಜಿದಾರರು ಉದ್ದೇಶ ಪೂರ್ವಕವಾಗಿ ಮಾಡಿಲ್ಲ ಎಂದರೆ ಸರಿಯಲ್ಲ. ಕರೋನ-19 ಸಂದರ್ಭದಲ್ಲಿ ಮೇಲ್ಕಂಡ ದಾವೆಯನ್ನು ನಡೆಸದ ಕಾರಣ ಪ್ರಸ್ತುತ ಅರ್ಜಿಯನ್ನು ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ಇದೇ ಅರ್ಜಿದಾರರ ವಿರುದ್ಧ ನಾನು ಇನ್ನು ಎರಡು ದಾವೆಗಳನ್ನು ಊಡಿದ್ದೇನೆ ಎಂದರೆ ಸಾಕ್ಷಿ ಒಂದು ದಾವೆಯನ್ನು ಎಂದು ನುಡಿಯುತ್ತಾರೆ. ಆ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಶಿರಾ.